ತಾಲ್ಲೂಕು/ಆಹಾರ ಉಪ ನಿರ್ದೇಶಕರ ಕಛೇರಿಗೆ ಹೋಗಿ ಅರ್ಜಿಗಳನ್ನು 'ಆನ್ ಲೈನ್' ಮೂಲಕ ಸಲ್ಲಿಸಬಹುದಾಗಿದೆ. ಗ್ರಾಮಾಂತರ ಪ್ರದೇಶದಲ್ಲಿ ವಾಸಿಸುವ ಜನರು ಕಡ್ಡಾಯವಾಗಿ ಸಂಬಂಧಿಸಿದ ಗ್ರಾಮ ಪಂಚಾಯಿತಿ ಕಛೇರಿಗೆ ಹೋಗಿ ಕಂಪ್ಯೂಟರ್‌ನಲ್ಲಿ 'ಆನ್ ಲೈನ್' ಆಗಿ ಅರ್ಜಿ ಸಲ್ಲಿಸಬೇಕಾಗಿದೆ. ಅರ್ಜಿಗಳನ್ನು ನಿಯಮಾನುಸಾರ ಸ್ಥಳ ತನಿಖೆ ಮಾಡಿ ಅರ್ಹತೆ ಆಧಾರದ ಮೇಲೆ ಎಎವೈ, ಬಿಪಿಎಲ್ ಹಾಗೂ ಎಪಿಎಲ್ ಕಾರ್ಡ್‌ಗಳನ್ನು ನೀಡಲಾಗುವುದು.

ಸಿಂಧನೂರು ನಗರ ಉಪ ಪ್ರಾದೇಶಿಕ ಸಾರಿಗೆ ಕಛೇರಿ

194 (526) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ)ಸಿಂಧನೂರು ನಗರದಲ್ಲಿ ಉಪ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಯಾವಾಗ ಪ್ರಾರಂಭಿಸಲಾಗುವುದು.

(ಆ) ಸಿಂಧನೂರು ಸುತ್ತಮುತ್ತಲಿನ ಸಾರ್ವಜನಿಕ ಹೊಸ ವಾಹನಗಳ ನೋಂದಣಿಗಾಗಿ ದೂರದ ರಾಯಚೂರು ಜಿಲ್ಲಾ ಕೇಂದ್ರಕ್ಕೆ ಹೋಗಬೇಕಾಗಿದ್ದು ಸ್ಥಳೀಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸಿಂಧನೂರಿನಲ್ಲಿ ಉಪ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ಪ್ರಾರಂಭಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ಆರ್. ಅಶೋಕ್: ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು :

(ಅ) ಸರ್ಕಾರದ ಮುಂದೆ ಈ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

(ಆ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

(ಇ) ಅನ್ವಯಿಸುವುದಿಲ್ಲ.

ರಾಜ್ಯದಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ

195 (527) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯಡಿಯಲ್ಲಿ ರಾಯಚೂರು ಜಿಲ್ಲೆಗೆ ನೀಡಬೇಕಾಗಿರುವ ಬಾಕಿ ಬಾಂಡ್‌ಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)